ಮೈಸೂರ ಗೆಜೆಟ್ಟ

ಸರ್ಕಾರದಿಂದ ಪಾಯಿಷ್ ಆದ್ದು.

ಬೆಂಗಳೂರು, ಶನಿವಾರ, ಮೇ ತಾ॥ 21, ಸ್ಯ 1887.

ಈ ಭಾಗವನ್ನು ಪ್ರತ್ಯೇಕ ಕೆರಿಸಿ ಇಡುವ ಬಗ್ಯೆ ಇದಕ್ಕೆ ಬೇರೆಯಾಗಿ ಪುಟ ಸಂಖ್ಯೆ ಕೊಡಲ್ಪಡುತ್ತೆ.

೨ನೇ ಭಾಗ.

ಇಂಡ್ಯಗವರ್ನಮೆಂಟ್, ರೆಸಿಡೆಂಟರು, ಚೀಫ್ ಜಡ್ಜ್ಗಿರು, ವಗ್ಯೆರೇರಿಂದ ಕೊಡೋಣಾದ ಇಸ್ತಿಹಾರ್ನಾಮೆಗಳು.

ಫಿನ್ಯಾಷಿಯಲ್ ಇಲಾಖಾ.

1882ನೇ ಇಸವಿಯ ಮೈಸೂರು ರೆಯಿಲ್‌ವೇ ಲೋನ್.

ತಾರೀಖು 6ನೇ ಜುಲೈ 1883.

ಲಂಡನ್‌ನಲ್ಲಿ ಬಡ್ಡೀ ಸಲ್ಲತಕ್ಕ ಬಗ್ಯೆ, ಪರಾ ಬರೆಯಲ್ಪಡಬಹುದಾದಂಥಾ ಸದರೀ ಸಾಲದ ಡಿಬೆಂಚರ್‌ಗಳ ಮೇಲೆ ಲಂಡನ್‌ನಲ್ಲಿ, ಸ್ಟ್ಯಾಂಡ್ ಬೀದಿ 59ನೇ ನಂಬರ್ ಕಟ್ಟಡದಲ್ಲಿರುವ ಬ್ಯಾಂಕರ್‌ಗಳಾದ ಮೆಸ್ಸರ್ಸ್ ಕಾಟ್ಸ್ ಅಂಡ್‌ಕೋ ಯವರು ಬಡ್ಡೀಯನ್ನು ಪಾವತೀ ಮಾಡುವ ಬಗ್ಯೆ ಅವರುಗಳೊಡನೆ ಮೈಸೂರು ಗವರ್ನಮೆಂಟಿನವರು ಯೇರ್ಪಾಡು ಮಾಡಿಕೊಂಡಿರುವದರಿಂದ ಲಂಡನ್‌ನಲ್ಲಿ ತಮ್ಮ ಡಿಬೆಂಚರ್‌ಗಳಿಗೆ ಬಡ್ಡೀಯನ್ನು ತೆಗದುಕೊಳ್ಳಲಿಕ್ಕೆ ಯಿಷ್ಟವುಳ್ಳ ಜನಗಳು ತಮ್ಮ ಡಿಬೆಂಚರ್‌ಗಳನ್ನು ಎಷ್ಟೇಸ್‌ಮೆಂಟ್ ಯಾನೇ ಪರಾ ಬಗ್ಯೆ ಇದರಡಿ ರುಜೂ ಮಾಡಿರುವರ ಆಫೀಸಿಗೆ ಕಳುಹಿಸತಕ್ಕದ್ದು.

ಬಡ್ಡಿಯು, ಮದ್ರಾಸ್‌ನಲ್ಲಿ ಮದರಾಸ್ ಬ್ಯಾಂಕಿನ ಮೇಲೆ, ಡ್ಯೂಪ್ಟಿಕೇಟೂದ ಡಿಮಾಂಡ್ ಡ್ರಾಫ್‌ಟ್ಸ್ ಯೆಂಬ ಚೆಕ್ಕುಗಳ ಮೂಲಕ ರೂಪಾಯಿಗಳಾಗಿ ಕೊಡಲ್ಪಡುವದು.

ಎಷ್ಟೇಸ್‌ಮೆಂಟ್ ಬಗ್ಯೆ ಫೀ ಯೇನೂ ಚಾರ್ಜ್ ಮಾಡಲ್ಪಡಲಾರದು.

ಹೆಚ್. ಹಡ್ಸನ್,
ಕಾಂಪ್‌ಟ್ರೋಲರ್.

ಬೆಂಗಳೂರು ಡಿಸ್ಟ್ರಿಕ್ಟು.

ಬೆಂಗಳೂರು ಸಬ್ ಜಡ್ಜ್ರೀಯವರ ಕೋರ್ಟಿನಲ್ಲಿ.

ದಿವಾಳಿಯಾದ ಡಿಕ್ರೀದೇಣೇದಾರ ಕಿಲ್ಲಘಟ್ಟ ತಾಲ್ಲೂಕು ಗಂಜಿಗುಂಟೆ ಹೋಬಳಿ ಚಿಕ್ಕ ಬರದರಗಟ್ಟದಲ್ಲಿ ಯಿರುವ ದೊಡ್ಡ ಬೈರಡ್ಡಿಯ ವಿಷಯದಲ್ಲಿ—

ಸ್ಯ 1887ನೇ ಇಸವಿ ದಿವಾಳಿ ಕೇಸ್ ನಂಬರು 44.

ಹುಕ್ಕುಂ.

ಮೇಲ್ಕಂಡ ದೊಡ್ಡ ಬೈರಡ್ಡಿಯು ನಿರ್ಬಂಧದಿಂದ ಖುಲಾಸೆಯಾಗಬೇಕೆಂದು ಕೊಟ್ಟ ಅರ್ಜೀ ಅಂಕವು ಬೆಂಗಳೂರು ಸಬ್ ಜಡ್ಜ್ರೀಯವರಾದ ಮೆ॥ ಕೈಸ್ ಸಾಹೇಬರವರ ರೂಬರೂ ಅರ್ಜೀದಾರನಾದ ಸದರೀಯವನ ಪರವಾಗಿ ಅಡ್ವೊಕೇಟ್ ರಾಮಸ್ವಾಮಯ್ಯಂಗಾರ್ರನ್ನು ದರ್ಯಾಫ್ತ್ ಮಾಡಲ್ಪಟ್ಟಿತು.

ಈ ಕೆಳಗೆ ನಮೂದು ಮಾಡಲ್ಪಡುವ ಲೇಣೇದಾರು ತಮಗೆ ಈ ದರ್ಖಾಸ್ತಿ ನೋಟೀಸ್ ಜಾರೀಯಾಗಿದ್ದಾಗ್ಯೂ ಖುದ್ದಾಗಿಯಾಗಲಿ ಅಥವಾ ಲಾಯರ್ ಮೂಲಕವಾಗಿಯಾಗಲಿ ಹಾಜರಾಗುವದಕ್ಕೆ ತಪ್ಪಿಹೋದರು, ಯಾರಂದರೆ—
1—2—3—4—5—6 ಮಂದಿ.

ಸಿವಿಲ್ ಪ್ರೊಸಿಜ್ಯೂರ್ ಕೋಡಿನ 20ನೇ ಅಧ್ಯಾಯದ ನಿರೂಪಣೆಗಳ ಫಲವನ್ನು ಸದರೀ ದೊಡ್ಡಚೈರರಡ್ಡಿಯು ಹೊಂದುವದಕ್ಕೆ ಹಕ್ಕುದಾರನಾಗುವದರ ಮೂಲಕ ದಿವಾಳಿಯಾದವನೆಂದು ತೀರ್ಮಾನಿಸಲ್ಪಟ್ಟಿರುತ್ತದೆಯಾಗಿ ಸದರೀ ದಿವಾಳಿಯಾದವನ್ನ ನಿರ್ಬಂಧದಿಂದ ವಿಮೋಚನೆ ಮಾಡಿರುವದಲ್ಲದೆ ಇದಕ್ಕೆ ಲಗ್ಗತ್ತಾಗಿರುವ ಪಟ್ಟಿಯಲ್ಲಿ ಕಂಡ ಪ್ರೂವ ಸಾಲಕ್ಕೊಸ್ಕರವಾಗಿಯೂಗಲಿ ದಸ್ತಗಿರೀ ಮಾಡಲ್ಪಟ್ಟು ನಿರ್ಬಂಧಪಡುವ ಜವಾಬ್ದಾರೀಯಿಂದ ಸಹ ಅವನ್ನ ನಿಖಾಲಸ್ ಮಾಡಲ್ಪಟ್ಟಿರುತ್ತೆಯೆಂದು ಯಿದರಿಂದ ಹುಕ್ಕುಂ ಮಾಡಲ್ಪಟ್ಟಿರುತ್ತೆ.

ಸ್ಯ 1887ನೇ ಯಿಸವಿ ಮಾರ್ಚೀ 11ನೇ ತಾರೀಖಿನಲ್ಲಿ ಈ ಕೋರ್ಟು ಮೊಹರ್ ನಮ್ಮ ದಸ್ತಖತ್‌ನಿಸಿ ಕೊಡಲ್ಪಟ್ಟಿತು.

ಸೂಲದಪಟ್ಟಿ.

ನಂಬರ್.	ಲೇಣೇದಾರು ಅಥವಾ ದಾವಾದಾರ ಹೆಸರು ಮತ್ತು ವಿವರ ಮತ್ತು ಹಾಲಿ ತಿಳಿಯಬಂದ ಅವರುಗಳ ವಾಸಸ್ಥಳ.	ಸೊಲಗಳು.	ಯಾವಾಗ ಡಿಕ್ರೀ ಹೊದದ್ದು.	ದೇಣೆಯ ಸ್ವಭಾವ ಮತ್ತು ಅದರ ಪ್ರತಿಫಲ ಮತ್ತು ಗಿರ್ವಿ ಯೇನಾದರೂ ಇದ್ದರೆ.	ಷರಾ.
1	ಚಿಂತಾಮಣಿ ಕಂಬಿಸುಬ್ಬೈಯ್ಯ ..	700 0 0	1886	ಚಿಕ್ಕಬಳ್ಳಾಪುರದ ಮುನ್ಸಿಫ್ ಕೋರ್ಟ್ ಆರಿಜಿನಲ್ ನಂ. 416ನೇ ಡಿಕ್ರೀ ಬಾಬತು	
2	ಡಿಟೋ ಅಪ್ಪಾಜೈಯ್ಯ ..	12 6 0	1886	ಡಿಕ್ರೀ ಬಾಬತು	
3	ಕೆಜ್ಜಫಟ್ಟ ತಾಲ್ಲೂಕು ಬಸೆಟ್ಟಹಳ್ಳಿಯಲ್ಲಿ ಇರುವ ಭೂಮನಹಳ್ಳಿ ಪಾರಯ್ಯಗೆ ..	500 0 0	1886	ಕೋಲಾರದ ಮುನ್ಸಿಫ್ ಕೋರ್ಟು ಆರಿಜಿನಲ್ ನಂ. 595ನೇ ಡಿಕ್ರೀ ಬಾಬತು	
		500 0 0	..	ತಮಸೂಕು ಬಾಬತು	
4	ಚಿಂತಾಮಣಿ ಕಂಬಿಸೀತಾರಾಮಯ್ಯ	38 6 0	1886	ಡಿಕ್ರೀ ಬಾಬತು	
5	ಕೆಜ್ಜಫಟ್ಟ ತಾಲ್ಲೂಕಿಗೆ ..	60 0 0	..	ಕಂದಾಯದ ಬಾಕೀ	
6	ಕೋಲಾರದಲ್ಲಿಯಿರುವ ಪ್ಲೀಡರ್ ವಕ್ಕಲೇರಿ ಕೃಷ್ಣರಾಯರಿಗೆ ..	20 0 0	..	ತಂಸೂಕು ಬಾಬತು	
		1830 12 0			

ಸಿ. ಕೈಸ್,
ಸಬ್ ಜಡ್ಜ್.

ಮೈಸೂರು ಡಿಸ್ಟ್ರಿಕ್ಟ್.

ಮೈಸೂರು ಡಿಸ್ಟ್ರಿಕ್ಟ್ ಜಡ್ಜ್‌ರೀಯವರ ಕೋರ್ಟ್‌ನಲ್ಲಿ.

1887ನೇ ಇಸವಿ ಅರ್ಜೀ ನಂಬರ್ 176.

ಮೃತಪಟ್ಟ ನಂಜಮ್ಮ ವುರಫ್ ಲಿಂಗಮ್ಮನವರ ಆಸ್ತಿ ವಿಷಯದಲ್ಲಿ—

ಅರ್ಜೀದಾರಳು ಮಾದಮ್ಮನವರು, ಮೃತಪಟ್ಟ ಸದರೀ ನಂಜಮ್ಮವುರಫ್ ಲಿಂಗಮ್ಮನವರಿಗೆ ಸೊಸೆ ಆಗಬೇಕೆಂಬ ಹಕ್ಕುದಾರೀ ಮೇಲೆ ಮೈಸೂರು ಹಳೆ ಅಗ್ರಹಾರದ ಸ್ಥಳದ ಸದರೀ ಮಾದಮ್ಮನವರು ಸದರೀ ವಾಸಸ್ಥರಾಗಿ ಮೃತಪಟ್ಟ ನಂಜಮ್ಮ ವುರಫ್ ಲಿಂಗಮ್ಮನವರ ಜಿಂದಗಿ ಬಗ್ಯಾಗಿ ಬರತಕ್ಕ 300 ರೂಪಾಯಿ ಸೂಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟ್ ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟ್‌ಗೆ ಖಾಯಿಷ್ ಮಾಡಿರುತ್ತಾರೆ.